ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ - ಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 05/12/

# ರಾಜೀನಾಮೆ ನೀಡದಂತೆ ಸಭಾಪತಿ ಮನವೊಲಿಸಿದ ಸಿದ್ದು?

ಬೆಂಗಳೂರು: ತಮ್ಮ ಮೇಲಿನ ಅವಿಶ್ವಾಸ ನಿರ್ಣಯದ ಪ್ರಸ್ತಾಪದ ಹಿನ್ನೆಲೆಯಲ್ಲಿ ರಾಜೀನಾಮೆಗೆ ಮುಂದಾಗಿದ್ದ ವಿಧಾನಪರಿಷತ್ ಸಭಾಪತಿ ಕೆ. ಪ್ರತಾಪ್‌ಚಂದ್ರ ಶೆಟ್ಟಿ ಅವರನ್ನು ವಿಪಕ್ಷ ನಾಯಕ ಸಿದ್ದರಾಮಯ್ಯ ಅವರು ತಡೆದು ಮನವೊಲಿಸಿದ್ದಾರೆ ಎಂದು ತಿಳಿದು ಬಂದಿದೆ. ಅಲ್ಲದೆ, ನೀವು ರಾಜೀನಾಮೆ ನೀಡದೆ ಅವಿಶ್ವಾಸ ನಿರ್ಣಯವನ್ನು ಎದುರಿಸಿ, ಇದರಿಂದ 'ಬಿಜೆಪಿ-ಜೆಡಿಎಸ್‌ನ ಹೊಂದಾಣಿಕೆ' ಬಯಲು ಮಾಡಿದಂತಾಗಲಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ ಎಂದು ಮೂಲಗಳು ತಿಳಿಸಿದೆ.

ಅವಿಶ್ವಾಸ ನಿರ್ಣಯ ಎಂಬುದು ಸದನದಲ್ಲೇ ನಿರ್ಧಾರವಾಗಲಿ, ಬಿಜೆಪಿಗೆ ಜೆಡಿಎಸ್ ಬೆಂಬಲ ನೀಡುವುದಾದರೆ ಆ ಸಂದೇಶ ಜನರಿಗೆ ತಲುಪಲಿ. ಇದೀಗ ನೀವು ರಾಜೀನಾಮೆ ನೀಡಿದರೆ ಜೆಡಿಎಸ್‌ನ ಬಣ್ಣ ಬಯಲು ಮಾಡುವ ಅವಕಾಶ ಕಳೆದುಕೊಂಡಂತಾಗಲಿದೆ ಎಂದು ಹೇಳಿ ಮನವೊಲಿಸಿರುವುದಾಗಿ ತಿಳಿದು ಬಂದಿದೆ. ಇತ್ತೀಚೆಗೆ ಕೆ. ಪ್ರತಾಪ್‌ಚಂದ್ರ ಶೆಟ್ಟಿ ಅವರು ಆದ ಸಿದ್ದರಾಮಯ್ಯರನ್ನು ಸಂಪರ್ಕಿಸಿ, ಅವಿಶ್ವಾಸ ನಿರ್ಣಯ ಅಂಗೀಕಾರಗೊಂಡು ಕೆಳಗಿಳಿಯುವ ಬದಲು ಸ್ವಯಂ ಪ್ರೇರಿತವಾಗಿ ರಾಜೀನಾಮೆ ನೀಡುತ್ತೇನೆ ಎಂದು ಹೇಳಿದ್ದರು. ಈ ವೇಳೆ ಸಿದ್ದರಾಮಯ್ಯ, ಜೆಡಿಎಸ್‌ನವರು ಬಿಜೆಪಿಯವರಿಗೆ ಬಹಿರಂಗವಾಗಿ ಬೆಂಬಲ ನೀಡಲಿ ಎಂದು ಹೇಳಿದ್ದಾರೆ ಎನ್ನಲಾಗಿದೆ.